# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103 ☎:0816-2255650,2273511ಫ್ಯಾಕ್ಸ್:0816-2270719

ಸಂಖ್ಯೆ:ತುವಿ:ಪ.ವಿ/19ನೇ ಘಟಿಕೋತ್ಸವ:2025-26/1298 ದಿನಾಂಕ:09.03.2026

## ದರಪಟ್ಟಿ ಆಹ್ವಾನ (ವಿ.ವಿ.ವೆಬ್‌ಸೈಟ್)

ವಿಷಯ: ತುಮಕೂರು ವಿಶ್ವವಿದ್ಯಾನಿಲಯದ ಹತ್ತೊಂಭತ್ತನೆಯ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸುವ ಗಣ್ಯ ವ್ಯಕ್ತಿಗಳ ಆತಿಥ್ಯ ಸತ್ಕಾರಕ್ಕಾಗಿ ಶಾಲು, ಹೂಗುಚ್ಛ, ಹೂವಿನ ಹಾರ ನೆನಪಿನ ಕಾಣಿಕೆಯನ್ನು ಸರಬರಾಜು ಪಡೆಯುವ ಸಂಬಂಧ ದರಪಟ್ಟಿ ಆಹ್ವಾನಿಸಿರುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:07.03.2026(ಕಂಡಿಕೆ-63).

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮುಂಬರುವ ತುಮಕೂರು ವಿಶ್ವವಿದ್ಯಾನಿಲಯದ ಹತ್ತೊಂಭತ್ತನೆಯ ವಾರ್ಷಿಕ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸುವ ಗಣ್ಯ ವ್ಯಕ್ತಿಗಳ ಆತಿಥ್ಯ ಸತ್ಕಾರಕ್ಕಾಗಿ ಶಾಲು, ಹೂಗುಚ್ಛ, ಹೂವಿನ ಹಾರ ನೆನಪಿನ ಕಾಣಿಕೆಯನ್ನು ಸರಬರಾಜು ಮಾಡಲು ಆಸಕ್ತ ಸಂಸ್ಥೆಗಳಿಂದ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ.

| ಕ್ರ. ಸಂ. | ವಿವರ | ಒಟ್ಟು ಅಂದಾಜು ಸರಬರಾಜಿನ ಪ್ರಮಾಣ | ದರ ರೂಗಳಲ್ಲಿ ಒಂದು ಪ್ರಮಾಣಕ್ಕೆ (ಎಲ್ಲಾ ತೆರಿಗೆ/ಸೇವೆ ಸೇರಿದಂತೆ) |
|---|---|---|---|
| 01 | Mysore Peta | 06 | |
| 02 | Special Hanging Shawl | 01 | |
| 03 | Jerry Shawl | 12 | |
| 04 | Momento VIP | 06 | |
| 05 | Special Malber Hara | 06 | |
| 06 | Doctorate Folder for Certificate | 03 | |
| 07 | Mani Hara | 06 | |
| 08 | Dry Fruit Set - Special | 06 | |

**ಷರತ್ತು ಮತ್ತು ನಿಬಂಧನೆಗಳು:**

1. ಮುಚ್ಚಿದ ಲಕೋಟೆಯ ಮೇಲೆ **"ಹತ್ತೊಂಭತ್ತನೆಯ ವಾರ್ಷಿಕ ಘಟಿಕೋತ್ಸವ ಸಮಾರಂಭಕ್ಕೆ ಶಾಲು, ಹೂಗುಚ್ಛ, ಹೂವಿನ ಹಾರ ನೆನಪಿನ ಕಾಣಿಕೆಯನ್ನು ಸರಬರಾಜು ಪಡೆಯುವ ಸಂಬಂಧ ದರಪಟ್ಟಿ"** ಎಂದು ಸ್ಪಷ್ಟವಾಗಿ ನಮೂದಿಸತಕ್ಕದ್ದು.
2. ದರಪಟ್ಟಿಗಳನ್ನು **ಕುಲಸಚಿವರು (ಮೌಲ್ಯಮಾಪನ), ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್. ರಸ್ತೆ, ತುಮಕೂರು-572 103** ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಲ್ಲಿ ವಿಶ್ವವಿದ್ಯಾನಿಲಯವು ಜವಾಬ್ದಾರರಾಗಿರುವುದಿಲ್ಲ.
3. ದರಪಟ್ಟಿಯನ್ನು ಸಲ್ಲಿಸಲು ಕೊನೆಯ **ದಿನಾಂಕ:23.03.2026ರಂದು ಸಂಜೆ 04-00.**
4. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
5. ಸರಬರಾಜು ಮಾಡಿದ 30 ದಿನಗಳೊಳಗೆ ಹುಂಡಿಯನ್ನು ವಿಶ್ವವಿದ್ಯಾನಿಲಯದ ನಿಯಮಾನುಸಾರ ಪಾವತಿಸಲು ಕ್ರಮ ಕೈಗೊಳ್ಳಲಾಗುವುದು.
6. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
7. ಷರತ್ತುಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.

(ಮು.ತಿ.ನೋ)

8. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
9. ದರಪಟ್ಟಿಯಲ್ಲಿ ನಮೂದಿಸಿರುವ ಸಾಮಗ್ರಿಗಳ ಪ್ರಮಾಣವನ್ನು ಹೆಚ್ಚಿಸುವ, ಕಡಿಮೆಗೊಳಿಸುವ ಅಥವಾ ರದ್ದು ಪಡಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
10. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
11. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ **ಉಪಕುಲಸಚಿವರು, ಪರೀಕ್ಷಾಂಗ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು** ಇವರನ್ನು ಸಂಪರ್ಕಿಸುವುದು.

**ಆದೇಶದ ಮೇರೆಗೆ,**

10/02

**ಕುಲಸಚಿವರು (ಮೌಲ್ಯಮಾಪನ)**

**ಪ್ರತಿಗಳು:**

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಗಳ ವಿಶೇಷಾಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯ ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
5. ಕಚೇರಿ ಪ್ರತಿ.